**All India Radio: Bangalore**
**Regional Bulletin In Kannada**
**14.10.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**14.10.2025 / 6.40 p.m.**

**<><><><>**

ಮುಖ್ಯಾಂಶಗಳು :

1. ಧಾರವಾಡದಲ್ಲಿ ಧರ್ತಿ ಬಯೋನೆಸ್ಟ್ ಇನ್‌ಕ್ಯುಬೇಷನ್ ಕೇಂದ್ರ ಉದ್ಘಾಟಿಸಿದ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ - ನಾಳೆಯಿಂದ ಕಲ್ಯಾಣ ಕರ್ನಾಟಕ ಪ್ರವಾಸ
2. ಬೆಂಗಳೂರಿನಲ್ಲಿ ರಾಜಕೀಯ ಕಾಲೇಜು ಆರಂಭಿಸಲು ಸರ್ಕಾರ ಚಿಂತನೆ - ಸಭಾಪತಿ ಬಸವರಾಜ ಹೊರಟ್ಟಿ
3. ಮೈಸೂರಿನಲ್ಲಿ ಇದೇ ೧೭ರಂದು ಬೃಹತ್ ಉದ್ಯೋಗ ಮೇಳ- ಸಚಿವ ಡಾ.ಶರಣ ಪ್ರಕಾಶ್ ಪಾಟೀಲ್
4. ಮಾಹಿತಿ ಹಕ್ಕು ನಿಯಮ ಅಧಿನಿಯಮಕ್ಕೆ ೨೦ ವರ್ಷ - ರಾಜ್ಯಪಾಲರಿಂದ ಸ್ಮರಣ ಸಂಚಿಕೆ ಬಿಡುಗಡೆ
5. ರಾಜ್ಯದಲ್ಲಿ ಅಭಿವೃದ್ಧಿಗಿಂತ ಅಧಿಕಾರದ ತಿಕ್ಕಾಟವೇ ಹೆಚ್ಚಾಗಿದೆ - ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಸಮಾಧಾನ

<><><><>

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಧಾರವಾಡದಲ್ಲಿ ಧರ್ತಿ ಬಯೋನೆಸ್ಟ್ ಇನ್ ಕ್ಯುಬೇಷನ್ ಕೇಂದ್ರವನ್ನು ಉದ್ಘಾಟಿಸಿದರು. ನಿರ್ಮಲಾ ಸೀತಾರಾಮನ್ ಅವರ ಸಂಸದರ ಸ್ಥಳೀಯ ಪ್ರದೇಶ ಅಭಿವೃದ್ಧಿ ಯೋಜನೆಯಡಿಯಲ್ಲಿ ೫ ಕೋಟಿ ೨೮ ಲಕ್ಷ ರೂಪಾಯಿ ಸಹಾಯಧನ ಮತ್ತು ಭಾರತ ಸರ್ಕಾರದ ಜೈವಿಕ ತಂತ್ರಜ್ಞಾನ ಇಲಾಖೆಯಡಿಯಲ್ಲಿ ಬಯೋಟೆಕ್ನಾಲಜಿ ಇಂಡಸ್ಟ್ರಿ ರಿಸರ್ಚ್ ಅಸಿಸ್ಟೆನ್ಸ್ ಕೌನ್ಸಿಲ್‌ನಿಂದ ೫ ಕೋಟಿ ರೂಪಾಯಿ ಸಹಾಯಧನದೊಂದಿಗೆ ಈ ಕೇಂದ್ರವನ್ನು ಸ್ಥಾಪಿಸಲಾಗಿದೆ. ಐಐಟಿ ಧಾರವಾಡದ ವಿದ್ಯಾರ್ಥಿಗಳೊಂದಿಗೆ ಸಂವಾದವನ್ನು ನಡೆಸಲಿದ್ದಾರೆ.

<><><><>

ನಾಳೆಯಿಂದ ಕಲ್ಯಾಣ ಕರ್ನಾಟಕ ಪ್ರದೇಶದ ಪ್ರವಾಸ ಕೈಗೊಳ್ಳುವುದಾಗಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಬಳ್ಳಾರಿಯಲ್ಲಿ ಮೆಣಸಿನ ಪುಡಿ ಮತ್ತು ಮೆಣಸಿನ ಬೀಜ ವಿಜಯನಗರದ ಕಡಲೆಬೇಳೆ,

ಹುರಿದ ಕಡಲೆ, ಕಡಲೆ ಚಿಕ್ಕಿ, ಘಟಕಗಳನ್ನು ಪರಿಶೀಲಿಸುವುದಾಗಿ ತಿಳಿಸಿದ್ದಾರೆ. ವಿಜಯನಗರ, ಬಳ್ಳಾರಿ, ಕೊಪ್ಪಳ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ ಘಟಕಗಳ ಉದ್ಘಾಟನೆ ನೆರವೇರಿಸಲಾಗುವುದು. ಕೃಷಿ ಸಂಸ್ಕರಣೆ ಕೇಂದ್ರಗಳಿಂದ ತರಬೇತಿ ಪಡೆದ ರೈತರು ಮತ್ತು ಲಾಭ ಪಡೆಯುವ ರೈತರು ಹಾಗೂ ರೈತರ ಉತ್ಪಾದಕರ ಸಂಘಗಳು ಮತ್ತು ಅವರ ಕುಟುಂಬಗಳನ್ನು ಭೇಟಿಯಾಗಲು ಉತ್ಸುಕನಾಗಿದ್ದೇನೆ ಎಂದು ಹೇಳಿದ್ದಾರೆ.

<><><>

ಕೇಂದ್ರ ಸರ್ಕಾರ ರೈತರು ಬೆಳೆದ ತೋಟಗಾರಿಕೆ ಹಣ್ಣಿನ ಬೆಳೆಗಳ ಸಂಸ್ಕರಣಾ ಘಟಕಕ್ಕೆ ನೆರವು ನೀಡುವ ಉದ್ದೇಶದಿಂದ ಕೊಪ್ಪಳದ ಮೆತಗಲ್ಲ ಗ್ರಾಮದಲ್ಲಿ ಹಣ್ಣುಗಳ ಸಂಸ್ಕರಣ ಘಟಕ ನಿರ್ಮಾಣವಾಗಿದೆ. ನಾಳೆ ಕೇಂದ್ರ ಸಚಿವೆ ನಿರ್ಮಲಾ ಸೀತರಾಮನ್ ಲೋಕಾರ್ಪಣೆ ಮಾಡಲಿದ್ದಾರೆ ಎಂದು ಕೊಪ್ಪಳ ಜಿಲ್ಲೆಯ ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ಕೃಷ್ಣ ವುಕ್ಕುಂದ ತಿಳಿಸಿದರು.

**ಧ್ವನಿ: ಕೃಷ್ಣ ವುಕ್ಕುಂದ ತೋಟಗಾರಿಕೆ ಇಲಾಖೆ ಉಪನಿರ್ದೇಶಕ**

ರಾಜ್ಯದಲ್ಲಿಯೇ ಅತಿ ಹೆಚ್ಚು ಮೆಣಸಿನಕಾಯಿ ಬೆಳೆಯುವ ಜಿಲ್ಲೆಗಳಲ್ಲಿ ಒಂದಾಗಿರುವ ಬಳ್ಳಾರಿ ಜಿಲ್ಲೆಯಲ್ಲಿ ಮೆಣಸಿನ ಕಾಯಿ ಫಸಲಿನ ಸಂಸ್ಕರಣಾ ಘಟಕವನ್ನು ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ನಾಳೆ ಉದ್ಘಾಟನೆ ಮಾಡಲಿದ್ದಾರೆ.

<><><>

ಕರ್ನಾಟಕ ವಿಧಾನ ಮಂಡಲ ವತಿಯಿಂದ ಬೆಂಗಳೂರಿನಲ್ಲಿ ರಾಜಕೀಯ ಕಾಲೇಜು ಆರಂಭಕ್ಕೆ ಸರ್ಕಾರ ಕ್ರಮ ಕೈಗೊಂಡಿದ್ದು, ಮುಂಬರುವ ಜೂನ್ ತಿಂಗಳಲ್ಲಿ ಕಾಲೇಜು ಪ್ರಾರಂಭವಾಗಲಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜಕೀಯಕ್ಕೆ ಆಗಮಿಸುವ ಹೊಸ ರಾಜಕಾರಣಿಗಳನ್ನು ತಯಾರುಗೊಳಿಸುವ ನಿಟ್ಟಿನಲ್ಲಿ ಈ ಪ್ರಯತ್ನ ನಡೆದಿದೆ ಎಂದು ಹೇಳಿದ್ದಾರೆ. ಮೂರು ವರ್ಷಗಳ ಪದವಿ ಶಿಕ್ಷಣದಲ್ಲಿ ರಾಜಕೀಯ ಸಂಹಿತೆ ಒಳಗೊಂಡ ಪಠ್ಯ ಕ್ರಮ ರೂಪಿಸಲು ತಜ್ಞರನ್ನು ಸಂಪರ್ಕಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅನುದಾನ ನೀಡುವ ಭರವಸೆ ನೀಡಿದ್ದಾರೆ ಎಂದು ಹೇಳಿದರು.

<><><>

ರಾಜ್ಯದ ಯುವಕರ ಭವಿಷ್ಯದ ದೃಷ್ಟಿಯಿಂದ ನಿರುದ್ಯೋಗ ಸಮಸ್ಯೆ ನಿವಾರಿಸಲು ಸರ್ಕಾರ ಉದ್ಯೋಗ ಮೇಳ ಆಯೋಜಿಸಿದೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯ ಅಭಿವೃದ್ಧಿ ಇಲಾಖೆ ಸಚಿವ ಡಾ ಶರಣಪ್ರಕಾಶ್ ಆರ್ ಪಾಟೀಲ್ ತಿಳಿಸಿದ್ದಾರೆ. ಮೈಸೂರಿನಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೇ ೧೭ರಂದು ಮೈಸೂರಿನ ಮಹಾರಾಜ

ಕಾಲೇಜು ಮೈದಾನದಲ್ಲಿ ಬೃಹತ್ ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಈ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಮೈಸೂರು ವಿಭಾಗೀಯ ಉದ್ಯೋಗ ಮೇಳಕ್ಕೆ ೨೪ ಸಾವಿರ ಉದ್ಯೋಗಾಂಕ್ಷಿಗಳು ಹೆಸರು ನೋಂದಾಯಿಸಿಕೊಂಡಿದ್ದಾರೆ ಎಂದು ಹೇಳಿದ್ದಾರೆ. ಬೆಳಗ್ಗೆ ೯ ರಿಂದ ಸಂಜೆ ೫ ಗಂಟೆಯವರೆಗೆ ಉದ್ಯೋಗ ಮೇಳ ನಡೆಯಲಿದೆ.

<><><>

ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮಾಹಿತಿ ಹಕ್ಕು ಅಧಿನಿಯಮ ಪ್ರಮುಖವಾದ ಕಾನೂನು ಆಗಿದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ತಿಳಿಸಿದ್ದಾರೆ. ಮಾಹಿತಿ ಹಕ್ಕು ಅಧಿನಿಯಮಕ್ಕೆ ೨೦ ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿಂದು ಆಯೋಜಿಸಿದ್ದ ಸಮಾರಂಭವನ್ನು ಉದ್ಘಾಟಿಸಿದ ಅವರು, ರಾಜ್ಯ ಮಾಹಿತಿ ಆಯೋಗ ಹೊರತಂದಿರುವ ಸ್ಮರಣ ಸಂಚಿಕೆಯನ್ನು ಲೋಕಾರ್ಪಣೆಗೊಳಿಸಿದರು.

ರಾಜ್ಯ ಮಾಹಿತಿ ಆಯೋಗದ ಮುಖ್ಯ ಆಯುಕ್ತ ಅಶ್ರಿತ್ ಮೋಹನ್ ಪ್ರಸಾದ್ ಮಾತನಾಡಿ, ರಾಜ್ಯದಲ್ಲಿ ಪ್ರತಿ ವರ್ಷ ೧೩ ಸಾವಿರ ಅರ್ಜಿಗಳನ್ನು ಮಾಹಿತಿ ಹಕ್ಕು ಕಾಯ್ದೆಯಡಿ ಸ್ವೀಕರಿಸಲಾಗುತ್ತಿದ್ದು, ಅವುಗಳನ್ನು ಶೀಘ್ರದಲ್ಲಿ ಇತ್ಯರ್ಥಪಡಿಸಲು ಕ್ರಮ ವಹಿಸಲಾಗಿದೆ ಎಂದು ತಿಳಿಸಿದರು.

<><><>

ಸರ್ಕಾರಕ್ಕೆ ರಾಜ್ಯದ ಜನರ ಹಿತ ಹಾಗೂ ನಾಡಿನ ಅಭಿವೃದ್ಧಿ ಬೇಕಾಗಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ ಎಂದು ದೂರಿದ್ದಾರೆ. ಬೆಂಗಳೂರಿನಲ್ಲಿ ಹಳ್ಳ ಬಿದ್ದ ರಸ್ತೆಗಳಿಂದ ನಿತ್ಯ ಸಾವು ನೋವು ಸಂಭವಿಸುತ್ತಿದ್ದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ಸಹೊದ್ಯೋಗಿಗಳಿಗೆ ಔತಣಕೂಟ ನೀಡುದರಲ್ಲಿ ಮಗ್ನರಾಗಿದ್ದಾರೆ. ಮುಂದಿನ ದಿನಗಳಲ್ಲಿ ಜನರು ತಕ್ಕ ಪಾಠ ಕಲಿಸಲಿದ್ದಾರೆ ಎಂದು ತಿಳಿಸಿದ್ದಾರೆ.

<><><>

ಬೆಳಗಾವಿ ಜಿಲ್ಲೆ ಖಾನಾಪುರ ತಾಲೂಕಿನ ನಂದಗಡದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿರ್ಮಿಸಲಾದ ಅತ್ಯಾಧುನಿಕ ಮ್ಯೂಜಿಯಂ ಕಾಮಗಾರಿ ಕೊನೆಯ ಹಂತದಲ್ಲಿದ್ದು, ಶೀಘ್ರದಲ್ಲಿಯೇ ಲೋಕಾರ್ಪಣೆ ಮಾಡಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ತಿಳಿಸಿದ್ದಾರೆ. ನಂದಗಡದಲ್ಲಿ ಇಂದು ಮ್ಯೂಜಿಯಂ ಕಾಮಗಾರಿಯ ಪ್ರಗತಿ ಪರಿಶೀಲನೆ ನಂತರ ಸುದ್ಧಿಗಾರರೊಂದಿಗೆ ಮಾತನಾಡಿದ ಅವರು, ಸಂಗೊಳ್ಳಿಯ ಹಾಗೂ ಆತನ ಸಹಚರರ ಸಾಹಸಮಯ ಇತಿಹಾಸವನ್ನು ಮ್ಯೂಜಿಯಮ್ ಒಳಗೊಂಡಿದೆ ಎಂದು ಹೇಳಿದ್ದಾರೆ.

## ಧ್ವನಿ : ಶಿವರಾಜ ತಂಗಡಗಿ

<><><>

ತಂಬಾಕು ಮುಕ್ತ ಯುವ ಅಭಿಯಾನ ೩.೦ ಅಡಿಯಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯಾದ್ಯಂತ ೩೦ ಗ್ರಾಮಗಳನ್ನು ತಂಬಾಕು ಮುಕ್ತ ಗ್ರಾಮಗಳನ್ನಾಗಿ ಮಾಡುವ ಗುರಿ ಹೊಂದಲಾಗಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ. ತಂಬಾ ಮುಕ್ತ ಯುವ ಅಭಿಯಾನ ೩.೦ ಸಭೆ ನಡೆಸಿ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಚರ್ಚಿಸಿ ಮಾತನಾಡಿದ ಅವರು ಜಿಲ್ಲೆಯಲ್ಲಿ ಡಿಸೆಂಬರ್ ೯ ರವರೆಗೆ ತಂಬಾಕು ಮುಕ್ತ ಯುವ ಅಭಿಯಾನ ನಡೆಯಲಿದೆ. ೪೦೦ ಶಾಲಾ ಕಾಲೇಜುಗಳನ್ನು ತಂಬಾಕು ಮುಕ್ತ ಶೈಕ್ಷಣಿಕ ಸಂಸ್ಥೆಗಳೆಂದು ಘೋಷಿಸುವ ಗುರಿ ಹೊಂದಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><>

ವಿಶ್ವ ಬಸವ ಚೈತನ್ಯ ಸಮಿತಿ ದಾವಣಗೆರೆಯ ೩ನೇ ವಾರ್ಷಿಕೋತ್ಸವದ ಅಂಗವಾಗಿ ರಾಣೇಬೆನ್ನೂರಿನ ಎಸ್.ಜೆ.ಎಂ ವಾಣಿಜ್ಯ ಮಹಾವಿದ್ಯಾಲಯದಲ್ಲಿ ಉಚಿತ ಹೃದಯ ತಪಾಸಣಾ ಶಿಬಿರ ಹಾಗೂ 'ಬಸವ ಕಿರಣ ಪ್ರಶಸ್ತಿ' ಸಮಾರಂಭ ನಡೆಯಿತು. ಡಾ. ವಿಜಯಲಕ್ಷ್ಮಿ ಬಾಳೆಕುಂದ್ರಿ ಅವರಿಗೆ 'ಬಸವ ಕಿರಣ ಪ್ರಶಸ್ತಿ' ಪ್ರದಾನ ಮಾಡಲಾಯಿತು. ಅವರು ಹೃದಯ ರೋಗದ ಲಕ್ಷಣಗಳು, ತಪಾಸಣೆ ವಿಧಾನಗಳು ಹಾಗೂ ಚಿಕಿತ್ಸೆ ಕುರಿತು ಮಾಹಿತಿ ನೀಡಿದರು.

<><><>

ಶಿಸ್ತು ಹಾಗೂ ಶಾಂತಿಗೆ ಹೆಸರಾಗಿರುವ ರಾಷ್ಟ್ರೀಯ ಸ್ವಯಂಸೇವಕ ಸಂಸ್ಥೆಯನ್ನು ನಿರ್ಬಂಧಿಸಲು ಯಾರಿಂದಲೂ ಸಾಧ್ಯವಿಲ್ಲ ಎಂದು ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ತಿಳಿಸಿದ್ದಾರೆ. ಹಾಸನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ನಾಯಕರು ಆರ್. ಎಸ್ .ಎಸ್ ಮತ್ತು ಸನಾತನ ಹಿಂದೂ ಧರ್ಮವನ್ನು ಗುರಿಯಾಗಿಸಿ ಮಾಡಿ ಮಾತನಾಡುತ್ತಿರುವುದು ಸರಿಯಲ್ಲ ಎಂದು ಹೇಳಿದ್ದಾರೆ.

<><><>

ಶೂನ್ಯದಿಂದ ೬ ವರ್ಷದ ಒಳಗಿನ ಮಕ್ಕಳ ಗಣತಿ ಕಾರ್ಯ ಮಾಡುವಂತೆ ಆದೇಶಿಸಿರುವ ಸರ್ಕಾರದ ನಿರ್ಧಾರ ಖಂಡಿಸಿ ದಾವಣಗೆರೆಯಲ್ಲಿಂದು ಗಣತಿದಾರ ಶಿಕ್ಷಕರು ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು. ಹಲವಾರು ಸವಾಲುಗಳ ನಡುವೆಯೂ ಜಿಲ್ಲೆಯಲ್ಲಿ ಶೇಕಡಾ ೯೭ ರಷ್ಟು ಗಣತಿ ಕಾರ್ಯ ಯಶಸ್ವಿಯಾಗಿ ಮುಗಿದಿದೆ. ಇದೀಗ ಮತ್ತೆ ಪ್ರತಿ ಗಣತಿದಾರರು ತಮಗೆ ನಿಗದಿಪಡಿಸಿದ ೧೫೦ ಮನೆಗಳಿಗೆ ತೆರಳಿ ೬ ವರ್ಷದೊಳಗಿನ ಮಕ್ಕಳ ಗಣತಿ ಮಾಡಬೇಕೆಂದು ಆದೇಶಿಸಿರುವುದು ಸರಿಯಲ್ಲ ಎಂದು ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ವೀರೇಶ್ ಒಡೆಯನಪುರ ತಿಳಿಸಿದ್ದಾರೆ. ತಕ್ಷಣವೇ ಗಣತಿದಾರರನ್ನು ಸಮೀಕ್ಷಾ

ಕಾರ್ಯದಿಂದ ಬಿಡುಗಡೆಗೊಳಿಸಿ ಶಾಲೆಗಳಿಗೆ ತೆರಳಲು ಅವಕಾಶ ನೀಡಬೇಕೆಂದು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>